## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಪಿ.ಸಿ.ಕುಮಾರ್, ಹಿಂದಿನ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, (ಗ್ರೇಡ್-1 ಕಾರ್ಯದರ್ಶಿ), ಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸುವ ಬಗ್ಗೆ ಆದೇಶ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 229 ವಿಸೇಬಿ 2015 ದಿ: 30.09.2015.

2) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರ ಪತ್ರ ಸಂಖ್ಯೆ:ಗ್ರಾಅಪ 464 ಉಖಾಯೋ 2015 ದಿನಾಂಕ 07.12.2015.

3) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 229 ವಿಸೇಬಿ 2015 ದಿ: 03.03.2016.

4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಮಂಡ್ಯರವರ ಪತ್ರ ದಿನಾಂಕ 21.12.2016.

---

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ:-(1)ರಲ್ಲಿ ಶ್ರೀ ಪಿ.ಸಿ.ಕುಮಾರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, (ಗ್ರೇಡ್-1 ಕಾರ್ಯದರ್ಶಿ), ಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರನ್ನು ಶ್ರೀ ಗುರುಮೂರ್ತಿ ಬಿನ್ ಅಂಕೇಗೌಡ ಇವರ ದೂರಿನ ಮೇರೆಗೆ ಸೇವೆಯಿಂದ ಅಮಾನತ್ತುಗೊಳಿಸಲಾಗಿದ್ದು, ತದನಂತರ ಮೇಲೆ ಓದಲಾದ ಕ್ರಮ ಸಂಖ್ಯೆ:-(2)ರಲ್ಲಿನ ವರದಿಯ ಆಧಾರದ ಮೇಲೆ ಸದರಿ ನೌಕರರನ್ನು ದಿನಾಂಕ 03.03.2016ರ ಆದೇಶದಲ್ಲಿ ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ, ಸೇವೆಗೆ ಪುನರ್ ಸ್ಥಾಪಿಸಲಾಗಿತ್ತು. ತದನಂತರ, ಆಪಾದಿತ ನೌಕರರ ವಿರುದ್ಧದ ದೂರಿನ ಬಗ್ಗೆ ಮತ್ತೊಮ್ಮೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯರವರ ಅಭಿಪ್ರಾಯವನ್ನು ಕೋರಲಾಗಿ, ಅದರಂತೆ, ಮೇಲೆ ಓದಲಾದ ಕ್ರಮ ಸಂಖ್ಯೆ:-(4)ರ ಪತ್ರದಲ್ಲಿ ಶ್ರೀ ಗುರುಮೂರ್ತಿ ಬಿನ್ ಅಂಕೇಗೌಡ ಇವರು ನೀರಿನ ಸಂಪರ್ಕವನ್ನು ನೀಡಿರುವುದಿಲ್ಲವೆಂಬ ಬಗ್ಗೆ ಸ್ಥಳ ತನಿಖೆಯನ್ನು ನಡೆಸಿ, ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಆಪಾದಿತ ನೌಕರರು ಯಾವುದೇ ದುರುದ್ದೇಶದಿಂದ ಈ ರೀತಿ ತಪ್ಪು ಮಾಡಿರುವುದಿಲ್ಲವೆಂದು, ಆದ್ದರಿಂದ ಅಮಾನತ್ತನ್ನು ತೆರವುಗೊಳಿಸಿ, ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಿದಲ್ಲಿ ನೌಕರರಿಗೆ ಸೂಕ್ತ ನ್ಯಾಯ ದೊರಕಿಸಿದಂತಾಗುವುದು ಹಾಗೂ ದೂರಿಗೆ ಸಂಬಂಧಿಸಿದಂತೆ ಈಗಾಗಲೇ ಕ್ರಮ ವಹಿಸಿರುವುದರಿಂದ ಶ್ರೀ ಪಿ.ಸಿ.ಕುಮಾರ್ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕೈಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಶಿಫಾರಸ್ಸನ್ನು ಮಾಡಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಗಣಿಸುತ್ತಾ, ಶ್ರೀ ಪಿ.ಸಿ.ಕುಮಾರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, (ಗ್ರೇಡ್-1 ಕಾರ್ಯದರ್ಶಿ), ಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ

ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಪ 229 ವಿಸೇಬಿ 2015 ದಿನಾಂಕ: 25.07.2017**

ಶ್ರೀ ಪಿ.ಸಿ.ಕುಮಾರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, (ಗ್ರೇಡ್-1 ಕಾರ್ಯದರ್ಶಿ), ಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರನ್ನು ದಿನಾಂಕ 03.03.2016ರ ಆದೇಶದಲ್ಲಿ ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ, ಸೇವೆಗೆ ಪುನರ್ ಸ್ಥಾಪಿಸಲಾಗಿದ್ದು, ಇವರು ಯಾವುದೇ ದುರುದ್ದೇಶದಿಂದ ಈ ರೀತಿ ತಪ್ಪು ಮಾಡಿರುವುದಿಲ್ಲವೆಂಬ ಅಂಶವನ್ನು ಪರಿಗಣಿಸಿ, ದಿನಾಂಕ 03.03.2016ರಲ್ಲಿ ಪ್ರಸ್ತಾಪಿಸಿರುವ ಇಲಾಖಾ ವಿಚಾರಣೆಯಿಂದ ಶ್ರೀ ಪಿ.ಸಿ.ಕುಮಾರ್ ಇವರನ್ನು ಮುಕ್ತಗೊಳಿಸಿ, ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/7/2017

(ಎಸ್ ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ ಮತ್ತು ಸಿ)(ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಪಾಂಡವಪುರ, ಮಂಡ್ಯ ಜಿಲ್ಲೆ.
3) ಸಂಬಂಧಿಸಿದ ನೌಕರರಿಗೆ.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.